ಕರ್ನಾಟಕ ಸರ್ಕಾರ
ಕರ್ನಾಟಕ ಪರೀಕ್ಷಾ ಪ್ರಾಧಿಕಾರ
ಬೆಂಗಳೂರು

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್–01/2023 ದಿನಾಂಕ: 28–07–2023

**ಡಿಪ್ಲೊಮಾ ಧಾರಕರಿಗೆ ಹಗಲು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷದ ಅಥವಾ 3ನೇ ಸೆಮಿಸ್ಟರ್‌ನ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಪ್ರವೇಶಕ್ಕೆ ಡಿಪ್ಲೊಮ ಸಾಮಾನ್ಯ ಪ್ರವೇಶ ಪರೀಕ್ಷೆ–2023**

ಸರ್ಕಾರದ ಆದೇಶ ಸಂಖ್ಯೆ ಇಡಿ 88 ಡಿಟಿಇ 2022 ಬೆಂಗಳೂರು ದಿನಾಂಕ 14-07-2022 ಅನ್ವಯ ಮೂರು ವರ್ಷಗಳ ಡಿಪ್ಲೊಮ ಇಂಜಿನಿಯರಿಂಗ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿ ಅರ್ಹತೆಯನ್ನು ಪಡೆದಿರುವ ಅಭ್ಯರ್ಥಿಗಳು ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷದ ಅಥವಾ 3ನೇ ಸೆಮಿಸ್ಟರ್‌ನ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ನೇರವಾಗಿ ಯಾವುದೇ ಇಂಜಿನಿಯರಿಂಗ್ ಕೋರ್ಸ್‌ಗಳನ್ನು ಆಯ್ಕೆ ಮಾಡಿಕೊಳ್ಳಲು ಆದೇಶಿಸಿದೆ. ಸರ್ಕಾರದ ಆದೇಶದ ಅನ್ವಯ 2023–24ನೇ ಸಾಲಿಗೆ ಪ್ರಾಧಿಕಾರವು ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷದ ಅಥವಾ 3ನೇ ಸೆಮಿಸ್ಟರ್‌ನ **"ಹಗಲು ಇಂಜಿನಿಯರಿಂಗ್ ಕಾಲೇಜುಗಳ"** ಪ್ರವೇಶಾತಿಗೆ ಅರ್ಹ ಡಿಪ್ಲೊಮ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು, ಲ್ಯಾಟರಲ್ ಎಂಟ್ರಿ ಮೂಲಕ ಈ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಹತೆ ಪಡೆಯಲು, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ 2023ರ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಬೇಕು. ಆರ್ಕಿಟೆಕ್ಚರ್ ಪ್ರವೇಶಕ್ಕೆ ಕೌನ್ಸಿಲ್ ಆಫ್ ಆರ್ಕಿಟೆಕ್ಚರ್ ನವರು ನಡೆಸಿದ NATA-2023 ಪರೀಕ್ಷೆಗೆ ಹಾಜರಾಗಿ valid NATA score ಅನ್ನು ಹೊಂದಿರಬೇಕು ಮತ್ತು ಕಡ್ಡಾಯವಾಗಿ ಆನ್ ಲೈನ್ ಮೂಲಕ ನೊಂದಣಿ ಮಾಡಿ ಅರ್ಜಿ ಸಲ್ಲಿಸಿ ಶುಲ್ಕವನ್ನು ಪಾವತಿಸಬೇಕು.

**ಶೈಕ್ಷಣಿಕ ವಿದ್ಯಾರ್ಹತೆ:** ಮೇಲಿನ ಎಲ್ಲಾ ಕೋರ್ಸ್‌ಗಳ ಪ್ರವೇಶಕ್ಕೆ ವಿವರವಾದ ಅರ್ಹತೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್ ಸೈಟ್ http://kea.kar.nic.in ನಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು, ಯಾವುದೇ ಕೋರ್ಸಿಗೆ ಅರ್ಜಿ ಸಲ್ಲಿಸುವ ಮೊದಲು ಅರ್ಹತಾ ವಿವರವನ್ನು ಪರಿಶೀಲಿಸಲು ಕೋರಲಾಗಿದೆ.

**ಪರಿಷ್ಕೃತ ಪಠ್ಯಕ್ರಮ:** ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದಿಂದ ನೀಡಿರುವ ಡಿಸಿಇಟಿ – 2023ರ ಪರೀಕ್ಷೆಯ ಪರಿಷ್ಕೃತ ಪಠ್ಯಕ್ರಮಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ. (ಎಲ್ಲಾ ಡಿಪ್ಲೊಮ ವಿಭಾಗಗಳಿಗೆ ಸಾಮಾನ್ಯವಾದದು)

| | | |
|---|---|---|
| i. | ನೊಂದಣಿ ಹಾಗು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 31–07–2023 ಬೆ.11.00 ರಿಂದ |
| ii. | ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 13–08–2023 ರಾತ್ರಿ 11.59 ರ ವರೆಗೆ |
| iii. | ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | 14–08–2023 ಸಂಜೆ 6.00 ರವರೆಗೆ |
| iv. | ಡಿಸಿಇಟಿ–2023ಕ್ಕೆ ಪ್ರವೇಶ ಪತ್ರವನ್ನು ಪ್ರಾಧಿಕಾರದ ವೆಬ್‌ಸೈಟಿನಿಂದ ಡೌನ್‌ಮಾಡುವುದು | ನಂತರ ತಿಳಿಸಲಾಗುವುದು. |

**ಸೂಚನೆ:**

- ಅಭ್ಯರ್ಥಿಗಳು ಆನ್ ಲೈನ್ ಮೂಲಕ ಡಿಪ್ಲೊಮ ಸಿಇಟಿ–2023ಕ್ಕೆ ದಾಖಲಿಸಿದ ಎಲ್ಲಾ ಮಾಹಿತಿಗಳನ್ನು ಅಂತಿಮ ಎಂದು ಪರಿಗಣಿಸಲಾಗುತ್ತದೆ ಮತ್ತು ಈ ಮಾಹಿತಿಯೇ ಮುಂದಿನ ಎಲ್ಲಾ ಪ್ರಕ್ರಿಯೆಗಳಿಗೆ ಆಧಾರವಾಗಿರುತ್ತದೆ ಹಾಗೂ ಯಾವುದೇ ಕಾರಣಕ್ಕೂ ದಾಖಲಿಸಿದ ಮಾಹಿತಿಯನ್ನು ಬದಲಾಯಿಸಲು ಅವಕಾಶವಿರುವುದಿಲ್ಲ.
- ಡಿಪ್ಲೊಮಾ ಸಿಇಟಿ–2023 ರ ಅರ್ಜಿ ನಮೂನೆಯಲ್ಲಿ ಜಾತಿ / ವರ್ಗ ಮತ್ತು ವಾರ್ಷಿಕ ಆದಾಯದ ಬಗ್ಗೆ ಒದಗಿಸಿರುವ ಮಾಹಿತಿಯು ವಿದ್ಯಾರ್ಥಿಗಳಿಗೆ ರ್‍ಯಾಂಕ್ ನೀಡುವುದಕ್ಕೆ / ಸೀಟು ಆಯ್ಕೆ ಮಾಡುವುದಕ್ಕೆ ಪರಿಗಣಿಸಲಾಗುವುದು ಮತ್ತು ಯಾವುದೇ ಕಾರಣಕ್ಕೂ ಬದಲಾಯಿಸಲು ಅವಕಾಶವಿರುವುದಿಲ್ಲ.

**2023 ರ ಡಿಪ್ಲೊಮಾ ಸಾಮಾನ್ಯ ಪ್ರವೇಶ ಪರೀಕ್ಷೆಯ ವೇಳಾಪಟ್ಟಿ**

| ದಿನಾಂಕ | ವಾರ | ವಿಷಯ (ಎಲ್ಲಾ ಪ್ರೋಗ್ರಾಂಗಳಿಗೆ) | ಸಮಯ | ಅಂಕಗಳು |
|---|---|---|---|---|
| 10–09–2023 | ಭಾನುವಾರ | a. Engineering Mathematics<br>b. Statistics & Analytics<br>c. IT Skills<br>d. Fundamentals of Electrical and Electronics engineering<br>e. Project Management Skills | ಬೆ. 10.00 ರಿಂದ ಮ. 1.00 (ಅವಧಿ–3.00 ಗಂಟೆಗಳು) | 100 |
| | | **ಕನ್ನಡ ಭಾಷಾ ಪರೀಕ್ಷೆ ಹೊರನಾಡು ಮತ್ತು ಗಡಿನಾಡು ಕನ್ನಡಿಗರಿಗೆ (ಬೆಂಗಳೂರಿನಲ್ಲಿ ಮಾತ್ರ)** | ಮ. 3.00 ರಿಂದ ಸಂ 4.00 | 50 |

**ವಿ.ಸೂ. ಹೆಚ್ಚಿನ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಲು ಸೂಚಿಸಿದೆ.**

ಸಹಿ/–
(ಎಸ್. ರಮ್ಯ ಭಾ.ಆ.ಸೇ.)
ಕಾರ್ಯನಿರ್ವಾಹಕ ನಿರ್ದೇಶಕರು